**ಮಾರಿಷಸ್‌ನ ಸಮುದಾಯ ಕಾರ್ಯಕ್ರಮದಲ್ಲಿ ಭಾರತೀಯ ಸಮುದಾಯ ಮತ್ತು ಭಾರತದ ಸ್ನೇಹಿತರನ್ನು ಉದ್ದೇಶಿಸಿ ಪ್ರಧಾನ ಮಂತ್ರಿ ಭಾಷಣ (ಮಾರ್ಚ್ 11, 2025)**

ಮಾರ್ಚ್ 11, 2025

ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಮಾರಿಷಸ್ ಪ್ರಧಾನ ಮಂತ್ರಿ ಶ್ರೀ ನವೀನ್ ಚಂದ್ರ ರಾಮಗೂಲಂ ಅವರೊಂದಿಗೆ ಇಂದು ಮಾರಿಷಸ್‌ನ ಟ್ರಿಯನಾನ್ ಕನ್ವೆನ್ಷನ್ ಸೆಂಟರ್ ನಲ್ಲಿ ನಡೆದ ವಿಶೇಷ ಕಾರ್ಯಕ್ರಮದಲ್ಲಿ ಮಾರಿಷಸ್‌ನಲ್ಲಿ ನೆಲೆಸಿರುವ ಭಾರತೀಯ ಸಮುದಾಯ ಮತ್ತು ಭಾರತದ ಸ್ನೇಹಿತರನ್ನು ಉದ್ದೇಶಿಸಿ ಮಾತನಾಡಿದರು. ವಿದ್ಯಾರ್ಥಿಗಳು, ವೃತ್ತಿಪರರು, ಸಾಮಾಜಿಕ-ಸಾಂಸ್ಕೃತಿಕ ಸಂಸ್ಥೆಗಳು ಮತ್ತು ವ್ಯಾಪಾರ ನಾಯಕರು ಸೇರಿದಂತೆ ಅನಿವಾಸಿ ಭಾರತೀಯ ಸಮುದಾಯದಿಂದ ಉತ್ಸಾಹಭರಿತ ಭಾಗವಹಿಸುವಿಕೆಗೆ ಈ ಕಾರ್ಯಕ್ರಮ ಸಾಕ್ಷಿಯಾಯಿತು.  ಜೊತೆಗೆ, ಮಾರಿಷಸ್‌ನ ಹಲವಾರು ಮಂತ್ರಿಗಳು, ಸಂಸದರು ಮತ್ತು ಇತರ ಗಣ್ಯರು ಸಹ ಸಭೆಯಲ್ಲಿ ಭಾಗವಹಿಸಿದ್ದರು.

2. ಸಮಾರಂಭದಲ್ಲಿ ಪ್ರಧಾನಿ ಮೋದಿಯವರನ್ನು ಸ್ವಾಗತಿಸಿದ ಪ್ರಧಾನಿ ರಾಮಗೂಲಂ, ರಾಷ್ಟ್ರೀಯ ದಿನಾಚರಣೆಯ ಸಂದರ್ಭದಲ್ಲಿ ಮಾರಿಷಸ್ ತನ್ನ ಅತ್ಯುನ್ನತ ನಾಗರಿಕ ಪ್ರಶಸ್ತಿ 'ಗ್ರ್ಯಾಂಡ್ ಕಮಾಂಡರ್ ಆಫ್ ದ ಆರ್ಡರ್ ಆಫ್ ಸ್ಟಾರ್ ಆಂಡ್ ಕೀ ಆಫ್ ದ ಇಂಡಿಯನ್ ಓಶಿಯನ್ [G.C.S.K]' ಅನ್ನು ಭಾರತದ ಪ್ರಧಾನ ಮಂತ್ರಿಯವರಿಗೆ ನೀಡುವುದಾಗಿ ಘೋಷಿಸಿದರು.  ಈ ಅಸಾಧಾರಣ ಗೌರವಕ್ಕಾಗಿ ಪ್ರಧಾನ ಮಂತ್ರಿ ಮೋದಿಯವರು ತಮ್ಮ ಕೃತಜ್ಞತೆ ವ್ಯಕ್ತಪಡಿಸಿದರು.

3. ತಮ್ಮ ಭಾಷಣದಲ್ಲಿ, ಪ್ರಧಾನಮಂತ್ರಿ ಅವರು ಮಾರಿಷಸ್ ಪ್ರಧಾನಮಂತ್ರಿ ಅವರ ಪ್ರೀತಿ ಮತ್ತು ಸ್ನೇಹಕ್ಕಾಗಿ ಹಾಗೂ ಎರಡು ದೇಶಗಳ ನಡುವೆ ಚೈತನ್ಯಭರಿತ ಮತ್ತು ವಿಶೇಷ ಸಂಬಂಧಗಳನ್ನು ಬಲಪಡಿಸುವಲ್ಲಿ ಅವರು ನೀಡಿದ ಕೊಡುಗೆಗಾಗಿ ಧನ್ಯವಾದಗಳನ್ನು ಸಲ್ಲಿಸಿದರು. ವಿಶೇಷ ಸಂಕೇತವಾಗಿ, ಪ್ರಧಾನಿ ರಾಮಗೂಲಂ ಮತ್ತು ಅವರ ಸಂಗಾತಿ ಶ್ರೀಮತಿ ವೀಣಾ ರಾಮಗೂಲಂ ಅವರಿಗೆ OCI ಕಾರ್ಡ್‌ಗಳನ್ನು ಹಸ್ತಾಂತರಿಸಿದರು. ಮಾರಿಷಸ್‌ನ ಜನರಿಗೆ ಅವರ ರಾಷ್ಟ್ರೀಯ ದಿನದ ಶುಭಾಶಯಗಳನ್ನು ತಿಳಿಸಿದ ಪ್ರಧಾನಮಂತ್ರಿ, ಎರಡು ದೇಶಗಳ ಹಂಚಿಕೆಯ ಐತಿಹಾಸಿಕ ಪ್ರಯಾಣವನ್ನು ಸ್ಮರಿಸಿದರು.  ಮಾರಿಷಸ್‌ನ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಸರ್ ಸೀವೂಸಾಗುರ್ ರಾಮಗೂಲಂ, ಸರ್ ಅನೆರೂದ್ ಜುಗ್ನಾಥ್, ಮಣಿಲಾಲ್ ಡಾಕ್ಟರ್ ಮತ್ತು ಇತರರಿಗೆ ಅವರು ಗೌರವ ಸಲ್ಲಿಸಿದರು ಮತ್ತು ಮಾರಿಷಸ್‌ನ ರಾಷ್ಟ್ರೀಯ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸುವುದು ತಮಗೆ ಗೌರವ ತಂದುಕೊಟ್ಟಿದೆ ಎಂದು ಹೇಳಿದರು. ಎರಡು ದೇಶಗಳ ಜನರ ನಡುವೆ ನಿಕಟ ಸಂಬಂಧಗಳ ಸ್ಥಾಪನೆಗೆ ಆಧಾರವಾಗಿರುವ ಹಂಚಿಕೆಯ ಪರಂಪರೆ ಮತ್ತು ಕೌಟುಂಬಿಕ ಸಂಪರ್ಕಗಳ ಬಗ್ಗೆ ಒತ್ತು ನೀಡಿ ಮಾತನಾಡಿದ ಪ್ರಧಾನಮಂತ್ರಿಯವರು, ಮಾರಿಷಸ್ ನಲ್ಲಿರುವ ಭಾರತೀಯ ಮೂಲದ ಸಮುದಾಯವು ತಮ್ಮ ಸಾಂಸ್ಕೃತಿಕ ಬೇರುಗಳನ್ನು

ರಕ್ಷಿಸಿರುವ ಮತ್ತು ಪೋಷಿಸಿರುವ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಈ ಬಾಂಡ್‌ಗಳನ್ನು ಮತ್ತಷ್ಟು ಬಲಪಡಿಸಲು, ಮಾರಿಷಸ್‌ಗಾಗಿ ವಿಶೇಷ ಯೋಜನೆಯನ್ನು ರೂಪಿಸಲಾಗಿದ್ದು, ಆ ಮೂಲಕ ಮಾರಿಷಸ್‌ನಲ್ಲಿರುವ ಭಾರತೀಯ ಮೂಲದ ಏಳನೇ ತಲೆಮಾರಿನ ಜನರಿಗೆ OCI ಕಾರ್ಡ್‌ಗಳು ಲಭ್ಯವಾಗುವಂತೆ ಮಾಡಬಹುದು. ಗಿರ್ಮಿಟಿಯಾ ಪರಂಪರೆಯನ್ನು ಪೋಷಿಸಲು ಭಾರತವು ಹಲವಾರು ಉಪಕ್ರಮಗಳನ್ನು ಬೆಂಬಲಿಸುತ್ತದೆ ಎಂದು ಪ್ರಧಾನಿ ಒತ್ತಿ ಹೇಳಿದರು.

4. ಮಾರಿಷಸ್‌ನ ನಿಕಟ ಅಭಿವೃದ್ಧಿ ಪಾಲುದಾರನಾಗುವ ಗೌರವ ಭಾರತಕ್ಕೆ ದೊರೆತಿದೆ ಎಂದು ಪ್ರಧಾನಮಂತ್ರಿ ಹೇಳಿದರು. ಮುಂದುವರಿದು, ಭಾರತ-ಮಾರಿಷಸ್ ವಿಶೇಷ ಸಂಬಂಧಗಳು ಭಾರತದ ಸಾಗರ್ ವಿಷನ್ ಮತ್ತು ಜಾಗತಿಕ ದಕ್ಷಿಣದೊಂದಿಗೆ ಅದರ ತೊಡಗುವಿಕೆಯಲ್ಲಿ ಪ್ರಮುಖ ಪಾತ್ರವನ್ನು ವಹಿಸಿವೆ ಎಂದು ಅವರು ವಿವರಿಸಿದರು. ಹವಾಮಾನ ಬದಲಾವಣೆಯ ಹಂಚಿಕೆಯ ಸವಾಲನ್ನು ನಿಭಾಯಿಸುವ ಬಗ್ಗೆ ಮಾತನಾಡಿದ ಅವರು, ಅಂತಾರಾಷ್ಟ್ರೀಯ ಸೌರ ಮೈತ್ರಿ ಮತ್ತು ಜಾಗತಿಕ ಜೈವಿಕ ಇಂಧನ ಮೈತ್ರಿ ಉಪಕ್ರಮಗಳಲ್ಲಿ ಮಾರಿಷಸ್‌ನ ಪಾಲುದಾರಿಕೆಯನ್ನು ಪ್ರಶಂಸಿಸಿದರು.  ಈ ಸಂದರ್ಭದಲ್ಲಿ, ಪ್ರಧಾನ ಮಂತ್ರಿಯವರು ಏಕ್ ಪೇಡ್ ಮಾ ಕೆ ನಾಮ್ (ತಾಯಿಯ ಹೆಸರಲ್ಲೊಂದು ಗಿಡ) ಉಪಕ್ರಮದ ಬಗ್ಗೆ ಒತ್ತಿ ಹೇಳಿದರು, ಇದರ ಅಡಿಯಲ್ಲಿ ಅವರು ಅದೇ ದಿನ ಐತಿಹಾಸಿಕ ಸರ್ ಸೀವೂಸಗೂರ್ ರಾಮಗೂಲಂ ಬೊಟಾನಿಕ್ ಗಾರ್ಡನ್‌ನಲ್ಲಿ ಸಸಿ ನೆಟ್ಟರು. ಪ್ರಧಾನಮಂತ್ರಿಯವರ ಪೂರ್ಣ ಭಾಷಣವನ್ನು **ಇಲ್ಲಿ** ನೋಡಬಹುದು.

5. ಈ ಕಾರ್ಯಕ್ರಮದಲ್ಲಿ ಇಂದಿರಾ ಗಾಂಧಿ ಸೆಂಟರ್ ಫಾರ್ ಇಂಡಿಯನ್ ಕಲ್ಚರ್ (IGCIC), ಮಹಾತ್ಮ ಗಾಂಧಿ ಇನ್ಸ್ಟಿಟ್ಯೂಟ್ (MGI) ಮತ್ತು ಅಣ್ಣಾ ವೈದ್ಯಕೀಯ ಕಾಲೇಜಿನ ಕಲಾವಿದರು ಆಕರ್ಷಕ ಸಾಂಸ್ಕೃತಿಕ ಪ್ರದರ್ಶನಗಳನ್ನು ನೀಡಿದರು.

ಪೋರ್ಟ್ ಲೂಯಿಸ್

ಮಾರ್ಚ್ 11, 2025